Akashvani : Bangalore
Regional Bulletin In Kannada
25.11.2024 / 14.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ನಾಡದೇವತೆ ಮೈಸೂರು ಚಾಮುಂಡೇಶ್ವರಿಗೆ ಚಿನ್ನದ ರಥ ನಿರ್ಮಾಣಕ್ಕೆ ಸರ್ಕಾರ ಸಿದ್ಧತೆ
- ದಾವಣಗೆರೆಯಲ್ಲಿ ಇಲಿ ಜ್ವರ ಪ್ರಕರಣ; ಮುಂಜಾಗ್ರತಾ ಕ್ರಮ ಅನುಸರಿಸಲು ಜಿಲ್ಲಾಡಳಿತ ಸೂಚನೆ
- ಬೆಂಗಳೂರಿನ ಬಸವನಗುಡಿಯಲ್ಲಿ ಇತಿಹಾಸ ಪ್ರಸಿದ್ಧ ಕಡಲೆಕಾಯಿ ಪರಿಷೆಗೆ ಚಾಲನೆ
- ಬಿಜೆಪಿ ಅವಧಿಯಲ್ಲಿ ರೈತರಿಗೆ ಅತಿ ಹೆಚ್ಚು ವಕ್ಫ್ ನೋಟಿಸ್- ಗೃಹ ಸಚಿವ ಡಾ.ಜಿ.ಪರಮೇಶ್ವರ್ ಆರೋಪ

<><*<><>*><>

ನಾಡದೇವಿ ಮೈಸೂರಿನ ಚಾಮುಂಡೇಶ್ವರಿಗೆ ಚಿನ್ನದ ರಥ ನಿರ್ಮಿಸುವ ಸಂಬಂಧ ಪರಿಶೀಲಿಸಿ, ಕೂಡಲೇ ಪ್ರಸ್ತಾವನೆ ಸಲ್ಲಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕಂದಾಯ ಇಲಾಖೆ ಧಾರ್ಮಿಕ ದತ್ತಿ ವಿಭಾಗದ ಪ್ರಧಾನ ಕಾರ್ಯದರ್ಶಿ ಅವರಿಗೆ ಆದೇಶಿಸಿದ್ದಾರೆ. ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮನವಿ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಈ ಆದೇಶ ನೀಡಿದ್ದಾರೆ. ಅಂದಾಜು ೧೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಚಿನ್ನದ ರಥ ನಿರ್ಮಿಸಲು ಸಿದ್ದತೆ ನಡೆದಿದೆ. ಚಿನ್ನದ ರಥ ನಿರ್ಮಾಣಕ್ಕೆ ಬೇಕಾದ ಅಂದಾಜು ವೆಚ್ಚದ ಪ್ರಸ್ತಾವನೆಯನ್ನು ಸರ್ಕಾರ ತಯಾರಿಸಬೇಕು. ದೇವಸ್ಥಾನದಲ್ಲಿ ಈ ಉದ್ದೇಶಕ್ಕೋಸ್ಕರ ಪ್ರತ್ಯೇಕ ಹುಂಡಿಯೊಂದನ್ನು ಇಡಬೇಕು. ಭಕ್ತರು ಅದರಲ್ಲಿ ಹಣ ಹಾಗೂ ಚಿನ್ನವನ್ನು ಹಾಕಲು ಅವಕಾಶ ನೀಡಬೇಕು. ಸಂಗ್ರಹಿತ ಕಾಣಿಕೆ ಹಣಕ್ಕಿಂತ ಹೆಚ್ಚಿಗೆ ಬೇಕಾಗುವ ಹಣವನ್ನು ಸರ್ಕಾರ ಭರಿಸಬೇಕು ಎಂದು ದಿನೇಶ್ ಗೂಳಿಗೌಡ ಮನವಿ ಮಾಡಿದ್ದರು. ಇದಕ್ಕೂ ಮುಖ್ಯಮಂತ್ರಿ ಸಿದ್ದರಾಮಯ್ಯ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಮಾಹಿತಿ ದೊರೆತಿದೆ.

<><*<><>*><>

ಸಾಮಾನ್ಯವಾಗಿ ಮಲೆನಾಡು ಸೇರಿದಂತೆ ಕರಾವಳಿ ಪ್ರದೇಶದಲ್ಲಿ ಹೆಚ್ಚಾಗಿ ಕಂಡು ಬರುತ್ತಿದ್ದ ಇಲಿ ಜ್ವರ ಈ ವರ್ಷ ಬಯಲು ಸೀಮೆ ದಾವಣಗೆರೆ ಜಿಲ್ಲೆಯಲ್ಲಿ ಹೆಚ್ಚಾಗಿ ಕಾಣಿಸಿಕೊಂಡಿದೆ. ಸಾರ್ವಜನಿಕರು ಮುಂಜಾಗ್ರತ ಕ್ರಮಗಳನ್ನು ಅನುಸರಿಸಬೇಕೆಂದು ಜಿಲ್ಲಾ ಆರೋಗ್ಯಾಧಿಕಾರಿ

ಡಾ.ಷಣ್ಮುಖಪ್ಪ ತಿಳಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅವರು ಜಿಲ್ಲೆಯಲ್ಲಿ ಕಳೆದ ಜನವರಿಯಿಂದ ಇಲ್ಲಿಯವರೆಗೂ ೪೨ ಪ್ರಕರಣಗಳು ಬೆಳಕಿಗೆ ಬಂದಿದ್ದು, ನಗರ ಪ್ರದೇಶಕ್ಕಿಂತ ಗ್ರಾಮೀಣ ಭಾಗದಲ್ಲಿ ಪ್ರಕರಣಗಳು ಏರಿಕೆಯಾಗಿವೆ. ನವೆಂಬರ್ ತಿಂಗಳಲ್ಲಿಯೇ ಏಳು ಪ್ರಕರಣಗಳು ಬೆಳಕಿಗೆ ಬಂದಿವೆ.

ಧ್ವನಿ: ಡಾ.ಷಣ್ಮುಖಪ್ಪ

೪೨ ಜನರ ಪೈಕಿ ೪೦ ಜನರು ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು ಈಗಾಗಲೇ ಗುಣಮುಖರಾಗಿದ್ದು, ಪ್ರಸ್ತುತ ಇಬ್ಬರು ಸೋಂಕಿತರು ಮಾತ್ರ ಚಿಕಿತ್ಸೆ ಪಡೆಯುತ್ತಿದ್ದಾರೆ.

<><*<><>*><>

ಮಂಡ್ಯ ಮೈಶುಗರ್ ಕಾರ್ಖಾನೆಯ ಪ್ರಸಕ್ತ ಸಾಲಿನ ಕಬ್ಬು ನುರಿಸುವಿಕೆಯನ್ನು ವಾಡಿಕೆಯಂತೆ ಸ್ಥಗಿತಗೊಳಿಸಲಾಗಿದೆ. ಸುದ್ದಿಗಾರರೊಂದಿಗೆ ಮಾತನಾಡಿದ ಕಾರ್ಖಾನೆಯ ಅಧ್ಯಕ್ಷ ಸಿ.ಡಿ.ಗಂಗಾಧರ, ಈ ವರ್ಷದಲ್ಲಿ ಕಾರ್ಖಾನೆ ಯಶಸ್ವಿಯಾಗಿ ನಡೆದಿದೆ ಎಂದು ತಿಳಿಸಿದ್ದಾರೆ. ಈ ಸಾಲಿನಲ್ಲಿ ೧ ಕೋಟಿ ೩೦ ಲಕ್ಷ ಕ್ವಿಂಟಾಲ್ ಸಕ್ಕರೆ ಉತ್ಪಾದನೆ ಆಗಿದ್ದು, ೪೫ ಕೋಟಿ ಮಾರಾಟದ ಹಣ ಬಂದಿದೆ. ೧೨ ಸಾವಿರ ಟನ್ ಮೊಲಾಸಸ್ ಉತ್ಪಾದನೆಯಿಂದ ೧೫ ಕೋಟಿ ೩೬ ಲಕ್ಷ ರೂಪಾಯಿ ಹಣ ಸಂಗ್ರಹವಾಗಿದ್ದು, ೧.೫೫ ಕೋಟಿ ಯೂನಿಟ್ ವಿದ್ಯುತ್ ಉತ್ಪಾದನೆಯಾಗಿದೆ. ಚೆಸ್ಕಾಂಗೆ ವಿದ್ಯುತ್ ಮಾರಾಟದಿಂದ ೪ ಕೋಟಿ ೩೩ ಲಕ್ಷ ರೂಪಾಯಿ ಹಣ ಬಂದಿದ್ದು, ಮುಂದಿನ ಸಾಲಿಗೆ ಈಗಾಗಲೇ ೬ ಲಕ್ಷ ಟನ್ ಕಬ್ಬು ಮುಂಗಡವಾಗಿ ಕಾಯ್ದಿರಿಸಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ಬಿಜೆಪಿ ಅವಧಿಯಲ್ಲಿ ರೈತರಿಗೆ ಹೆಚ್ಚು ವಕ್ಫ್ ನೋಟಿಸ್ ನೀಡಲಾಗಿತ್ತು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಸತ್ಯವನ್ನು ಯಾವತ್ತೂ ಹೆಚ್ಚು ದಿನ ಮುಚ್ಚಿಡಲು ಆಗುವುದಿಲ್ಲ ಎಂದು ಹೇಳಿದ್ದಾರೆ. ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ರೈತರಿಗೆ ಹೆಚ್ಚು ನೋಟಿಸ್ ನೀಡಲಾಗಿದೆ. ಮಾಜಿ ಶಾಸಕ ಕುಮಾರ್ ಬಂಗಾರಪ್ಪ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಿ ಸುಮಾರು ೨ ಸಾವಿರದ ೯೦೦ ಎಕರೆಗೆ ನೋಟಿಸ್ ಜಾರಿ ಮಾಡಿದ್ದಾರೆ. ಸಿದ್ದರಾಮಯ್ಯನವರ ಕಾಲದಲ್ಲಿ ಬರಿ ೩೦೦ ಎಕರೆಗೆ ನೋಟಿಸ್ ನೀಡಲಾಗಿದೆ. ವಕ್ಫ್ ವಿಚಾರ ಮುಂದಿಟ್ಟುಕೊಂಡು ಹೋರಾಟ ನಡೆಸುತ್ತಿರುವ ಬಿಜೆಪಿ ನಾಯಕರು, ಇನ್ನಾದರು ಅರ್ಥಮಾಡಿಕೊಳ್ಳುವಂತೆ ತಿರುಗೇಟು ನೀಡಿದ್ದಾರೆ.

<><*<><>*><>

ಮೈಸೂರಿನ ಅರ್ಲಿ ಬರ್ಡ್ ಸಂಸ್ಥೆಯ ಕೆಲಸವನ್ನು ಮನ್ ಕಿ ಬಾತ್‌ನಲ್ಲಿ ನಿನ್ನೆ ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ. ಪಕ್ಷಿಗಳ ಮೂಲಕ ನೈಸರ್ಗಿಕ ಇತಿಹಾಸವನ್ನು ಈ ಸಂಸ್ಥೆ, ಪರಿಚಯಿಸುತ್ತಿದೆ. ಈ ಬಗ್ಗೆ ಅರ್ಲಿ ಬರ್ಡ್ ಸಂಸ್ಥೆಯ ನಿರ್ವಾಹಕಿ ಅಭಿಷೇಕ ಕೃಷ್ಣಗೋಪಾಲ್ ಆಕಾಶವಾಣಿ ಜೊತೆ ಸಂತಸ ಹಂಚಿಕೊಂಡಿದ್ದಾರೆ. ಕರ್ನಾಟಕ ಪಂಚಾಯತ್ ರಾಜ್ ಸಹಯೋಗದೊಂದಿಗೆ ರಾಜ್ಯದ ಸುಮಾರು ೬ ಸಾವಿರ ಗ್ರಾಮಪಂಚಾಯಿತಿಯ ಗ್ರಂಥಾಲಯಗಳಲ್ಲಿ ಪ್ರಕೃತಿ ಶಿಕ್ಷಣವನ್ನು ಪರಿಚಯಿಸಲಾಗುತ್ತಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಅಭಿಷೇಕ ಕೃಷ್ಣಗೋಪಾಲ್

<><*<><>*><>

ಬೆಂಗಳೂರಿನ ಬಸವನಗುಡಿಯ ಇತಿಹಾಸ ಪ್ರಸಿದ್ಧ ಕಡಲೆಕಾಯಿ ಪರೀಷೆಗೆ ಚಾಲನೆ ದೊರೆತಿದೆ. ರಾಜ್ಯದ ವಿವಿಧ ಬಗೆಯ ಕಡಲೆಕಾಯಿಯನ್ನು ರೈತರು ಇಲ್ಲಿ ತಂದು ನೇರವಾಗಿ ಮಾರಾಟಮಾಡುತಿದ್ದಾರೆ. ನೂರಾರು ವರ್ಷಗಳ ಇತಿಹಾಸ ಹೊಂದಿರುವ ಈ ಜಾತ್ರೆಯಲ್ಲಿ ವಿವಿಧ ಬಗೆಯ ಕಡಲೆಕಾಯಿಗಳು ದೊರೆಯುತ್ತಿ ವೆ. ಕಾರ್ತಿಕ ಮಾಸದ ಕೊನೆಯ ಸೋಮವಾರ ದೊಡ್ಡ ಬಸವಣ್ಣ ದೇವಸ್ಥಾನದಲ್ಲಿ ಬಸವನಿಗೆ ಕಡಲೆಕಾಯಿ ಹಾಗೂ ಪುಷ್ಪಗಳಿಂದ ಅಲಂಕಾರ ಮಾಡಲಾಗುತ್ತಿದೆ. ಕನಕಪುರ, ದೊಡ್ಡಬಳ್ಳಾಪುರ, ರಾಮನಗರ, ಮಾಗಡಿ, ಮೈಸೂರು, ಮಂಡ್ಯ ಸೇರಿದಂತೆ ರಾಜ್ಯದ ಹಲವೆಡೆಯಿಂದ ವ್ಯಾಪಾರಿಗಳು ಕಡಲೆಕಾಯಿ ತಂದು ಮಾರಾಟ ಮಾಡುತ್ತಾರೆ. ಈ ಬಾರಿ ಪ್ಲಾಸ್ಟಿಕ್ ಮುಕ್ತ ಪರಿಷೆ ನಡೆಸಲು ಪಣತೊಡಲಾಗಿದೆ. ಪ್ಲಾಸ್ಟಿಕ್ ಬಳಸದಂತೆ ವ್ಯಾಪಾರಿಗಳಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಈ ಹಿಂದೆ ಟೆಂಡರ್ ಪಡೆದವರ ಬಳಿ ಪ್ರತಿ ಮಳಿಗೆಯಿಂದ ದಿನಕ್ಕೆ ೫೦೦ ರಿಂದ ಸಾವಿರ ರೂಪಾಯಿವರೆಗೆ ಸುಂಕ ವಸೂಲಿ ಮಾಡಲಾಗುತ್ತಿತ್ತು. ಈ ಬಾರಿ ವ್ಯಾಪಾರಿಗಳಿಂದ ಸುಂಕ ವಸೂಲಿ ಮಾಡದಂತೆ ಮುಜರಾಯಿ ಇಲಾಖೆ ಸೂಚನೆ ನೀಡಿದೆ. ಪರಿಷೆ ನಡೆಯುತ್ತಿರುವುದರಿಂದ ವಾಹನ ಸಂಚಾರ ವ್ಯವಸ್ಥೆಯಲ್ಲಿ ಹಲವು ಬದಲಾವಣೆ ಮಾಡಲಾಗಿದೆ.

<><*<><>*><>

ಕಾರ್ತಿಕ ಮಾಸದ ಕೊನೆಯ ಸೋಮವಾರದ ಪ್ರಯುಕ್ತ ಇಂದು ಚಿಕ್ಕಬಳ್ಳಾಪುರ ತಾಲ್ಲೂಕಿನ ಇತಿಹಾಸ ಪ್ರಸಿದ್ಧ ನಂದಿ ಗ್ರಾಮದ ಭೋಗ ನಂದೀಶ್ವರ ದೇವಾಲಯದಲ್ಲಿ ವಿಶೇಷ ರಥೋತ್ಸವ ನಡೆಯಿತು. ಭೋಗನಂದೀಶ್ವರ ಸ್ವಾಮಿ ಮೂರ್ತಿಗೆ ವಿಶೇಷ ಅಲಂಕಾರ ಮಾಡಲಾಗಿತ್ತು. ದೇವಾಲಯದ ಆವರಣದಲ್ಲಿ ವಿಶೇಷವಾಗಿ ನೂರಾರು ಮಹಿಳೆಯರು ಹಣತೆಗಳನ್ನು ಬೆಳಗುವ ಮೂಲಕ ಭಕ್ತಿ ಸಮರ್ಪಿಸಿದರು. ದಕ್ಷಿಣ ಕಾಶಿ ಕೋಲಾ೩ದ ಅಂತರಗಂಗೆಯ ಕಾಶಿ ವಿಶ್ವೇಶ್ವರ ಸನ್ನಿಧಿಯಲ್ಲಿ ಕಾರ್ತಿಕ ಮಾಸದ ಕಡೆಯ ಸೋಮವಾರ ಭಕ್ತರು ದೇವರ ದರ್ಶನ ಪಡೆದರು.

<><*<><>*><>

ಪ್ರಾಚೀನ ಸಂಸ್ಕೃತಿ, ಸಂಪ್ರದಾಯಗಳ ಉಳಿವಿಗೆ ಜಾತ್ರೆ, ಉತ್ಸವ, ಧಾರ್ಮಿಕ ಮಹೋತ್ಸವಗಳು ಸಹಕಾರಿ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ತಿಳಿಸಿದ್ದಾರೆ. ಕೆ.ಆರ್. ನಗರದಲ್ಲಿಂದು ನಡೆದ ಮಲೆ ಮಹದೇಶ್ವರ ಸ್ವಾಮಿ ಜಳನೇ ಉತ್ಸವದಲ್ಲಿ ಭಾಗಿಯಾಗಿ ಮಾತನಾಡಿದ ಅವರು, ಕಾರ್ತೀಕ ಮಾಸ ಬೆಳಕಿನ ಹಬ್ಬ. ನಮ್ಮೆಲ್ಲರಲ್ಲಿ ಇರುವ ಅಜ್ಞಾನವೆಂಬ ಅಂಧಕಾರವನ್ನು ತೊಡದುಹಾಕಿ, ಸುಜ್ಞಾನವೆಂಬ ಬೆಳಕನ್ನು ಹಚ್ಚುವ ಮಾಸ ಕಾರ್ತೀಕ. ಈ ಸಂದರ್ಭದಲ್ಲಿ ಧಾರ್ಮಿಕ ವಿಚಾರಗಳ ವಿನಿಮಯದ ಜೊತೆಗೆ ಸಹಬಾಳ್ವೆಯ ಮಹತ್ವ ಸಾರಲಾಗುತ್ತದೆ ಎಂದು ಹೇಳಿದರು.

<><*<><>*><>

ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ವತಿಯಿಂದ ಬೆಂಗಳೂರಿನಲ್ಲಿಂದು ೬೯ನೇ ಕರ್ನಾಟಕ ರಾಜ್ಯೋತ್ಸವ ಆಚರಿಸಲಾಯಿತು. ಬಿಇಎಲ್ ಕಾರ್ಯನಿರ್ವಾಹಕ ನಿರ್ದೇಶಕರಾದ ಆನ್ಸಿ ಜೇಮ್ಸ್ ಕನ್ನಡ ಧ್ವಜಾರೋಹಣ ನೆರವೇರಿಸಿದರು. ಈ ವೇಳೆ ಕಾರ್ಯನಿರ್ವಾಹಕ ನಿರ್ದೇಶಕರಾದ ಜೆ.ಕೆ.ದುರ್ಗಾ, ಕಾರ್ಯವಾಹಿ ಪ್ರಧಾನ ವ್ಯವಸ್ಥಾಪಕ ಚೇತನ್ ಜಯಸಿಂಗ್ ಪಾಟೀಲ್, ಪ್ರಧಾನ ವ್ಯವಸ್ಥಾಪಕರಾದ ಮಂಜುಳಾ ದೇವಿ ಮತ್ತಿತರರು ಉಪಸ್ಥಿತರಿದ್ದರು. ವಿವಿಧ ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ವಿಜೇತರಾದ ಉದ್ಯೋಗಿಗಳನ್ನು ಸನ್ಮಾನಿಸಲಾಯಿತು.

<><*<><>*><>

ಇನ್ನು ಸಂಕ್ಷಿಪ್ತ ಸುದ್ದಿಗಳು...

೧. ಮಂಡ್ಯದಲ್ಲಿ ಡಿಸೆಂಬರ್ ೨೦ರಿಂದ ನಡೆಯಲಿರುವ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಬಗ್ಗೆ ಜಾಗೃತಿ ಮೂಡಿಸುವ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ 'ಕನ್ನಡ ಜ್ಯೋತಿ ರಥ ಇಂದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಗೆ ಆಗಮಿಸಿತು. ವಿವಿಧ ಕಲಾತಂಡಗಳೊಡನೆ ಸಾಹಿತ್ಯ ರಥ ಸಂಚರಿಸಿತು.

೨. ನಾಳೆ ಕೊಪ್ಪಳದಲ್ಲಿ ಅಗ್ನಿವೀರ್ ನೇಮಕಾತಿಗೆ ರ್‍ಯಾಲಿ ನಡೆಯಲಿದೆ ಎಂದು ಬೆಳಗಾವಿ ಸೇನಾ ನೇಮಕಾತಿ ವಿಭಾಗ ತಿಳಿಸಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>